# ವಿಜಯಪುರ ಲೋಕಸಭಾ ಸಾರ್ವತ್ರಿಕ ಚುನಾವಣೆ: ನಾಲ್ಕನೆ ದಿನ ನಾಲ್ಕು ನಾಮಪತ್ರ ಸಲ್ಲಿಕೆ






ವಿಜಯಪುರ ಏ : ವಿಜಯಪುರ(ಪ ಜಾ) ಲೋಕಸಭೆ ಮತಕ್ಷೇತ್ರದಲ್ಲಿ ನಾಲ್ಕನೆ ದಿನವಾದ ಬುಧವಾರದಂದು ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯಾಗಿ ಬಾಬು ರಾಜೇಂದ್ರ ನಾಯಿಕ ಅವರು ಒಂದು ನಾಮಪತ್ರ, ಕರ್ನಾಟಕ ರಾಷ್ಟ್ರೀಯ ಸಮಿತಿ (ಕೆಆರ್‌ಎಸ್ ) ಪಕ್ಷದಿಂದ ಗಣಪತಿ ಲಾಲಸಿಂಗ್ ರಾಠೋಡ ಒಂದು ನಾಮಪತ್ರ, ರಾಣಿ ಚೆನ್ನಮ್ಮ ಪಕ್ಷದ ಅಭ್ಯರ್ಥಿಯಾಗಿ ಕವಿತಾ ದೀಪಕ ಉರ್ಫ್ ಶ್ರೀ ವೆಂಕಟೇಶ್ವರ ಮಹಾಸ್ವಾಮೀಜಿ ಕಟಕದೊಂಡ್ ಅವರು ಒಂದು ಹಾಗೂ ಹಿಂದೂಸ್ತಾನ ಜನತಾ ಪಕ್ಷದಿಂದ ದೀಪಕ ಉರ್ಫ್ ಶ್ರೀ ವೆಂಕಟೇಶ್ವರ ಮಹಾಸ್ವಾಮಿಜಿ ಒಂದು ನಾಮಪತ್ರ ಸಲ್ಲಿಸುವ ಮೂಲಕ ಒಟ್ಟಾರೆ ನಾಲ್ಕು ಅಭ್ಯರ್ಥಿಗಳಿಂದ ನಾಲ್ಕು ನಾಮಪತ್ರಿಗಳು ಸಲ್ಲಿಕೆಯಾದವು. ಏಪ್ರಿಲ್ 12 ರಿಂದ ಇಲ್ಲಿಯವರೆಗೆ ಒಂಬತ್ತು ಅಭ್ಯರ್ಥಿಗಳಿಂದ ಒಟ್ಟಾರೆಯಾಗಿ ಹದಿನೆಂಟು ನಾಮಪತ್ರಗಳು ಸಲ್ಲಿಕೆಯಾಗಿರುತ್ತವೆ.

# ಸರ್ವ ವೃತ್ತಿಪರರ ಬೆಂಬಲ ಅಗತ್ಯ- ಕ್ಯಾವಟರ್



ಗಂಗಾವತಿ: ಸದೃಢ, ವಿಕಸಿತ ಕೊಪ್ಪಳ ಲೋಕಸಭಾ ಕ್ಷೇತ್ರದ ನಿರ್ಮಾಣಕ್ಕೆ ಸರ್ವ ವೃತ್ತಿಪರರ ಬೆಂಬಲ ಅಗತ್ಯ ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಹೇಳಿದರು.
ತಾಲೂಕಿನ ವಕೀಲರ ಸಂಘಕ್ಕೆ ಗುರುವಾರ ಭೇಟಿ ನೀಡಿದ ಅವರು, ಮುಂಬರುವ ಲೋಕಸಭಾ ಚುನಾವಣೆಗೆ ಸಹಕಾರ ಕೋರಿದರು.

ವೃತ್ತಿಪರರಿಗೆ ಕೇಂದ್ರ ಬಿಜೆಪಿ ಸರ್ಕಾರವು ಹಲವಾರು ಅನುಕೂಲಗಳನ್ನು ಕಲ್ಪಿಸಿದೆ. ಅವರು ಸಮಾಜಕ್ಕೆ ಕೊಡುಗೆ ನೀಡುತ್ತಿದ್ದು, ಮತ್ತೊಮ್ಮೆ ಮೋದಿ ಅವರನ್ನು ಪ್ರಧಾನಮಂತ್ರಿ ಮಾಡುವ ನಿಟ್ಟಿನಲ್ಲಿ ನಿಮ್ಮೆಲ್ಲರ ಸಹಕಾರ ಅಗತ್ಯವಾಗಿದೆ. ನಿಮ್ಮ ಆಶೀರ್ವಾದದಿಂದ ಮೊದಲ ಬಾರಿಗೆ ಬಿಜೆಪಿಯಿಂದ ಸ್ಪರ್ಧಿಸಿದ್ದೇನೆ. ಬಿಜೆಪಿಗೆ ಮತ ಹಾಕಿ ಹಾಗೂ ಹಾಕಿಸುವ ಮೂಲಕ ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಕಾರಣೀಕರ್ತರಾಗಬೇಕು ಎಂದರು.

ಇದೇ ವೇಳೆ ವಕೀಲರ ಸಂಘದಿಂದ ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಪರಣ್ಣ ಮುನವಳ್ಳಿ, ವಕೀಲರ ಸಂಘದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಮಸಾಲೆ, ಉಪಾಧ್ಯಕ್ಷ ಹೆಚ್.ಎಂ.ಮಂಜುನಾಥ, ಕಾರ್ಯದರ್ಶಿ ಚನ್ನಪ್ಪ ಮಾಳಗಿ, ಎಸ್.ಕೆ.ದಂಡಿನ ಯಾದವರವರು, ಹಾಲಸಮುದ್ರ, ಎ.ಆರ್.ದೇಶಪಾಂಡೆ, ಪ್ರೇಮಮೂರ್ತಿ ಹಿರೇಮಠ, ಹೆಚ್.ಗಿರಿಗೌಡ, ನಾಗರಾಜ ಗೌಳಿ, ಭೂಸನೂರ ಮಠ, ರಾಘವೇಂದ್ರ ಪಾನಗಂಟಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ನರೇಗಾ ಕಾರ್ಮಿಕರಿಗೆ ಮತದಾನ ಜಾಗೃತಿ ಮೂಡಿಸಿದ ಜಿ.ಪಂ. ಸಿಇಓ ರಿಷಿ ಆನಂದ



ವಿಜಯಪುರ ಏ. : ಸಾರ್ವತ್ರಿಕ ಲೋಕಸಭಾ ಚುನಾವಣೆ ಇದೇ ಮೇ 07ರಂದು ಜರುಗಲಿದ್ದು, ಮತದಾನದ ದಿನದಂದು ಕಡ್ಡಾಯವಾಗಿ ಮತಗಟ್ಟೆಗಳಿಗೆ ಬಂದು ಎಲ್ಲರೂ ಮತದಾನ ಮಾಡಿ, ಮತದಾನವನ್ನು ನಮಗಾಗಿ, ನಮ್ಮ ಭವಿಷ್ಯಕ್ಕಾಗಿ, ನಮ್ಮ ಸಮಾಜಕ್ಕಾಗಿ ಮತ್ತು ನಮ್ಮ ದೇಶಕ್ಕಾಗಿ ಮತದಾನ ಮಾಡಿ ಚುನಾವಣೆ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ರಿಶಿ ಆನಂದ ಹೇಳಿದರು.

ಅವರು ವಿಜಯಪುರ ತಾಲೂಕಿನ ನಾಗಠಾಣ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಳ್ಳುತ್ತಿರುವ ಕೆರೆಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ನರೇಗಾ ಕಾರ್ಮಿಕರಿಗೆ ಮತದಾನ ಜಾಗೃತಿ ಮೂಡಿಸಿದರು. ಪ್ರಸ್ತುತ ಜಿಲ್ಲೆಯಲ್ಲಿ ಬರಗಾಲ ಇರುವುದರಿಂದ ನರೇಗಾ ಯೋಜನೆಯಡಿ ಈ ವರ್ಷದ ಏಪ್ರಿಲ್, ಮೇ ಹಾಗೂ ಜೂನ್ ತಿಂಗಳು ಗಳಲ್ಲಿ ಕೂಲಿ ಆಧಾರಿತ ಕಾಮಗಾರಿಗಳನ್ನು ಮಾತ್ರ ಕೈಗೊಳ್ಳಲಾಗುತ್ತಿದೆ. ಆದ್ದರಿಂದ ಎಲ್ಲರೂ ಇನ್ನೂ ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ಕೂಲಿ ಕಾರ್ಮಿಕರು ಕೆಲಸಕ್ಕೆ ಬರಬೇಕು. ನರೇಗಾ ಯೋಜನೆಯಡಿ ಪುರುಷರಿಗೆ ಮತ್ತು ಮಹಿಳೆಯರಿಗೆ ಸಮಾನವಾದ ಕೂಲಿ ಒದಗಿಸಲಾಗುತ್ತಿದೆ ಪ್ರತಿದಿನ ಒಬ್ಬರಿಗೆ 349 ರೂಪಾಯಿಗಳನ್ನು ನೀಡಲಾಗುತ್ತಿದೆ ಎಂದರು.

ಜನರಿಗೆ ನರೇಗಾ ಯೋಜನೆಯಡಿ ಉದ್ಯೋಗ ಒದಗಿಸಲು ತಾಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಎಲ್ಲಾ ಅಧಿಕಾರಿಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿರುತ್ತದೆ. ಆದ್ದರಿಂದ ತಾವೆಲ್ಲರೂ ಇನ್ನೂ ಹೆಚ್ಚು ಹೆಚ್ಚು ಉದ್ಯೋಗ ಮಾಡಿ ಯೋಜನೆಯ ಸೌಲಭ್ಯ ಪಡೆದುಕೊಳ್ಳಬೇಕು ಮತ್ತು ಅಭಿವೃದ್ಧಿ ಹೊಂದಬೇಕು. ಕಾಮಗಾರಿ ಸ್ಥಳದಲ್ಲಿ ತಮ್ಮೆಲ್ಲರಿಗೂ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತದೆ ಹಾಗೂ ಮೂಲಭೂತ ಸೌಕರ್ಯಗಳಾದ ನೆರಳಿನ ವ್ಯವಸ್ಥೆ, ಕುಡಿಯುವ ನೀರು ಮತ್ತು ಉಚಿತ ಆರೋಗ್ಯ ತಪಾಸಣೆ ವ್ಯವಸ್ಥೆಗಳನ್ನು ಮಾಡಲಾಗಿದೆ. ಪ್ರಸ್ತುತ ದಿನಗಳಲ್ಲಿ ಬಿಸಿಲಿನ ತಾಪಮಾನ ಅತೀ ಹೆಚ್ಚು ಇರುವುದರಿಂದ ತಮ್ಮೆಲ್ಲರಿಗೂ ಆರೋಗ್ಯದಲ್ಲಿ ಏರುಪೇರು ಉಂಟಾಗದಂತೆ ಎಚ್ಚರವಹಿಸಿ, ಕಾಮಗಾರಿ ಸ್ಥಳದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಪ್ರತಿಯೊಬ್ಬರೂ ಕಡ್ಡಾಯವಾಗಿ ನಿಮ್ಮ ನಿಮ್ಮ ಆರೋಗ್ಯವನ್ನು ತಪಾಸಣೆ ಮಾಡಿಸಿಕೊಳ್ಳಿ ಆರೋಗ್ಯದಲ್ಲಿ ಸಮಸ್ಯೆಗಳಿದ್ದರೆ ಹೆಚ್ಚಿನ ಚಿಕಿತ್ಸೆಯ ಅವಶ್ಯವಿದ್ದಲ್ಲಿ ತಾಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳಿಗೆ ಶಿಫಾರಸ್ಸು ಮಾಡಲಾಗುವುದು ಆದ್ದರಿಂದ ನೀವೆಲ್ಲರೂ ಇದರ ಸದುಪಯೋಗವನ್ನು ಪಡೆದು ಆರೋಗ್ಯವಂತರಾಗಿರಬೇಕು ಎಂದು ಹೇಳಿದರು.

ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುವ ಕೂಲಿ ಕಾರ್ಮಿಕರ ಮೂರು ವರ್ಷದ ಒಳಗಿನ ಮಕ್ಕಳನ್ನು ಆರೈಕೆ ಮಾಡಲು ಜಿಲ್ಲೆಯಲ್ಲಿ 163 ಕೂಸಿನ ಮನೆಗಳನ್ನು ಪ್ರಾರಂಭ ಮಾಡಲಾಗಿದೆ. ಅದೇ ರೀತಿ ನಾಗಠಾಣ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿಯೂ ಸಹ ಕೂಸಿನ ಮನೆಯನ್ನು ಪ್ರಾರಂಭಿಸಲಾಗಿದೆ. ಎಲ್ಲರೂ ನಿಮ್ಮ ಮೂರು ವರ್ಷದ ಒಳಗಿನ ಮಕ್ಕಳನ್ನು ಕೂಸಿನ ಮನೆಯಲ್ಲಿ ಬಿಟ್ಟು ಕೆಲಸಕ್ಕೆ ಬರಬಹುದು. ಸದರಿ ಕೂಸಿನ ಮನೆಯಲ್ಲಿ ನಿಮ್ಮ ಮಕ್ಕಳನ್ನು ನೋಡಿಕೊಳ್ಳಲು ಮತ್ತು ಆರೈಕೆ ಮಾಡಲು ಪ್ರತ್ಯೇಕವಾಗಿ ಮಕ್ಕಳ ಆರೈಕೆದಾರರನ್ನು ಆಯ್ಕೆ ಮಾಡಲಾಗಿದೆ. ಅಲ್ಲಿ ಮಕ್ಕಳ ಆರೈಕೆದಾರರು ಮಕ್ಕಳಿಗೆ ಆಟ-ಪಾಠ, ಪಾಲನೆ-ಪೋಷಣೆ, ವೈಯಕ್ತಿಕ ಸ್ವಚ್ಛತೆ ಕಡೆಗೆ ವಿಶೇಷಗಮನ ನೀಡುತ್ತಾರೆ. ನೀವು ನಿರ್ಭೀತಿಯಿಂದ ನಿಮ್ಮ ಮಕ್ಕಳನ್ನು ಕೂಸಿನ ಮನೆಗಳಲ್ಲಿ ಬಿಟ್ಟು ನೆಮ್ಮದಿಯಿಂದ ಕೆಲಸ ಮಾಡಬಹುದು ಎಂದು ತಿಳಿಸಿದರು.

ನಂತರ ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿ ಸಾಕ್ಷಿ ಹಿರೇಮಠ ರವರು ಮತದಾನ ಜಾಗೃತಿ ಗೀತೆಯನ್ನು ಹಾಡಿದರು. ಜಿ.ಪಂ ಎನ್.ಆರ್.ಎಲ್.ಎಮ್ ವ್ಯವಸ್ಥಾಪಕರಾದ ಅಮೋಘಸಿದ್ಧ ಗೌಳಿಯವರು ಮತದಾರರ ಪ್ರತಿಜ್ಞಾ ವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ 282 ಮಹಿಳೆಯರು, 133 ಪುರುಷರು, ಒಟ್ಟು 415 ಕೂಲಿ ಕಾರ್ಮಿಕರು ಸ್ಥಳದಲ್ಲಿದ್ದರು. ಇದೇ ವೇಳೆ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿಗಳಾದ ಬಿ. ಎಸ್. ಮೂಗನೂರಮಠ, ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿಗಳಾದ ಸಿ. ಆರ್. ಮುಂಡರಗಿ, ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ. ಹೊಂಗಯ್ಯ, ತಾ.ಪಂ. ಸಹಾಯಕ ನಿರ್ದೇಶಕರು(ಗ್ರಾ.ಉ) ಕಾಸಿಮಸಾಬ ಮಸಳಿ, ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿ ಸಹನಾ ಕುಡಿಗನೂರ, ನಾಗಠಾಣ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಬಿ. ಆರ್. ರಾಠೋಡ, ತಾಂತ್ರಿಕ ಸಂಯೋಜಕರು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಪತಂಜಲಿ ವತಿಯಿಂದ ಬೆಳಗಾವಿಯಲ್ಲಿ ವಿಶೇಷ ಯೋಗ ಶಿಬಿರ ಯಶಸ್ವಿ



ಬೆಳಗಾವಿ : ಪತಂಜಲಿ ಯೋಗ ಸಮಿತಿ, ಬೆಳಗಾವಿ ವತಿಯಿಂದ ಇನ್ಸ್ಟಿಟ್ಯೂಷನ್ ಆಫ್ ಇಂಜಿನೀಯರ್ಸ್ (ಇಂಡಿಯಾ) ಲೋಕಲ್ ಸೆಂಟರ್ ಬೆಳಗಾವಿ ಅವರ ಸಭಾಭವನದಲ್ಲಿ ಇಂದು ವಿಶೇಷ ಯೋಗ, ಧ್ಯಾನ, ಪ್ರಾಣಾಯಾಮ ಶಿಬಿರ ಆಯೋಜನೆ ಮಾಡಲಾಗಿತ್ತು. ಇದರಲ್ಲಿ ಪತಂಜಲಿ ಯೋಗ ಪೀಠ, ಕರ್ನಾಟಕದ ವರಿಷ್ಠ ರಾಜ್ಯ ಪ್ರಭಾರಿ ಅಂತರರಾಷ್ಟ್ರೀಯ ಯೋಗ ಗುರು ಭವರಲಾಲ್ ಆರ್ಯ ಅವರು ಯೋಗ ಮಾರ್ಗದರ್ಶನ ಮಾಡಿದರು. ಬೆಳಗಿನ ಯೋಗ ಶಿಬಿರ ಯೋಗ ದೀಪ ಪ್ರಜ್ವಲನೆ ಮಾಡಿ ಉದ್ಘಾಟಿಸಲಾಯಿತು.

ನಂತರ ಯೋಗಿಕ್ ಜಾಗಿಂಗ್, ಸೂರ್ಯ ನಮಸ್ಕಾರ, ಬೊಜ್ಜು ನಿವಾರಣೆಗಾಗಿ ಯೋಗ, ಮಧುಮೇಹ ನಿವಾರಣೆಗಾಗಿ ಯೋಗ ಹಾಗೂ ಹಲವಾರು ರೋಗಗಳ ನಿವಾರಣೆಗಾಗಿ ರೋಗ ಅನುಸಾರ ಯೋಗಗಳನ್ನು ಇವತ್ತು ಅಭ್ಯಾಸ ಮಾಡಿಸಲಾಯಿತು ನಂತರ ವಿಶೇಷವಾಗಿ ಓಂಕಾರ ಧ್ಯಾನ ಇವತ್ತಿನ ಸಾಧಕರಿಗೆ ಮಾಡಿಸಿದರು. ಆ ಓಂಕಾರ ಧ್ಯಾನ ನಮ್ಮ ಉಸಿರಾಟದ ಕ್ರಿಯೆಗಳನ್ನು ಗಮನಿಸುತ್ತಾ ಉಸಿರಾಟದ ಜೊತೆ ಓಂಕಾರದ ನಾದ ಮೌನವಾಗಿ ಮಾಡುತ್ತಾ ಇರುವುದರಿಂದ ಶಾರೀರಿಕ ಮತ್ತು ಮಾನಸಿಕ ಹಲವಾರು ತೊಂದರೆಗಳನ್ನು, ನಿದ್ರಾ ಹೀನತೆಯನ್ನು, ಒತ್ತಡ ಸ್ಟ್ರೆಸ್ ನಿವಾರಣೆಗಾಗಿ ಜೊತೆಗೆ ದೇಹದಲ್ಲಿರುವ ನಕಾರಾತ್ಮಕ ಟಾಕ್ಸಿನ್ ಗಳನ್ನೂ ಹೊರಗೆ ಹಾಕಲಿಕ್ಕೆ ಓಂಕಾರ ಧ್ಯಾನದ ಪದ್ಧತಿ ತುಂಬಾ ಪರಿಣಾಮಕಾರಿಯಾಗಿದೆ. ಇದು ತುಂಬಾ ಸರಳವಾದ ಪದ್ಧತಿ ಹಾಗೂ ವೈಜ್ಞಾನಿಕವಾಗಿ ಪತಂಜಲಿ ರಿಸರ್ಚ್ ಫೌಂಡೇಶನ್ ಮೂಲಕ ಸಂಶೋಧನೆ ಮಾಡಿ ತುಂಬಾ ಪರಿಣಾಮಕಾರಿ ಪದ್ಧತಿಯನ್ನು ಪ್ರತಿಯೊಬ್ಬರೂ ಪ್ರತಿದಿನ 5 – 10 – 15 ನಿಮಿಷ ಸಮಯವಿದ್ದರೆ, ಸಾಧ್ಯವಾದರೆ, 108 ಬಾರಿ ಓಂಕಾರ ಧ್ಯಾನದ ಅನುಷ್ಠಾನ ಮಾಡಿ ಆರೋಗ್ಯವಾಗಿರಲಿಕ್ಕೆ ತುಂಬಾ ಸಹಾಯವಾಗುತ್ತದೆ.

ಜೊತೆಗೆ ಈ ಒಂದು ಅಭಿಯಾನ ಬೆಳಗಾವಿಯ 55 ವಾರ್ಡ್ ಗಳಲ್ಲಿ ನಿರಂತರ ಉಚಿತ ಒಂದೊಂದು ಯೋಗ ಕೇಂದ್ರ ಸ್ಥಾಪನೆ ಹಾಗೂ ಬೆಳಗಾವಿ ಜಿಲ್ಲೆಯ ಪ್ರತಿ ತಾಲೂಕಿನಲ್ಲಿ ಸಹ ಈ ತರದಉಚಿತ ಒಂದೊಂದು ಯೋಗ ಕೇಂದ್ರಗಳನ್ನು ಸ್ಥಾಪನೆ ಮಾಡುವಂತಹ ಒಂದು ಯೋಗ ಶಿಕ್ಷಕರ ತರಬೇತಿ ಶಿಬಿರ ಬೆಳಗಾವಿಯಲ್ಲಿದಿನಾಂಕ : 20 ಏಪ್ರಿಲ್ 2024 ರಿಂದ ಆರಂಭ ಮಾಡುತ್ತಿದ್ದಾರೆ. ಅದರ ನೋಂದಣಿ ಈಗಾಗಲೇ ಆರಂಭವಾಗಿದೆ.ಆನ್ಲೈನ್ ಮತ್ತು ಆಫ್ ಲೈನ್ ಎರಡು ತರದ ತರಬೇತಿ ಬೆಳಗಾವಿಯಲ್ಲಿ ನಡೆಯಲಿದೆ. ಆಸಕ್ತರು ಪತಂಜಲಿ ಯೋಗ ಸಮಿತಿ ಬೆಳಗಾವಿಗೆ ಸಂಪರ್ಕ : 9448013817 , 9481557173 , 9448113847 ಮಾಡಬಹುದು. ಜೊತೆಗೆ ಪತಂಜಲಿಯ ದೇಶಿ ಉತ್ಪನ್ನಗಳ ಮಳಿಗೆಗಳನ್ನು ತೆರೆಯಲು ಸಹ ಬೆಳಗಾವಿ ಗ್ರಾಮೀಣ ಭಾಗದಲ್ಲಿ ನಾವು ಅರ್ಜಿಗಳನ್ನು ಆಹ್ವಾನ ಮಾಡಿದ್ದೇವೆ ಆಸಕ್ತರು ನಮ್ಮನ್ನು ಸಂಪರ್ಕ ಮಾಡಬಹುದು. ಉಚಿತವಾಗಿ ಯೋಗ ಶಿಬಿರ ಆಯೋಜನೆ ಮಾಡಲು ಸಹ ನಮ್ಮ ಪತಂಜಲಿ ಕಾರ್ಯಕರ್ತರನ್ನು ಸಾರ್ವಜನಿಕರು ಸಂಪರ್ಕ ಮಾಡಬಹುದು ಎಂದು ತಿಳಿಸಿದರು.

ಈ ವಿಶೇಷ ಕಾರ್ಯಕ್ರಮದಲ್ಲಿ ಪತಂಜಲಿ ಯೋಗ ಸಮಿತಿ, ಉತ್ತರ ಕರ್ನಾಟಕದ ರಾಜ್ಯ ಪ್ರಭಾರಿ ಕಿರಣ ಮನ್ನೋಲ್ಕರ್, ಜಿಲ್ಲಾ ಪ್ರಭಾರಿಗಳಾದ ಮೋಹನ ಬಾಗೇವಾಡಿ, ಪುರುಷೋತ್ತಮ್ ಪಟೇಲ್, ಜ್ಯೋತಿಬಾ ಭಾಡವಂಕರ್, ಚಂದ್ರಕಾಂತ್ ಖಂಡಾಗಲೆ, ಸಂಗೀತಾ ಕೋನಾಪುರೆ, ಮಗಾನಭಾಯಿ ಪಟೇಲ್ ಮುಂತಾದವರು ಉಪಸ್ಥಿತರಿದ್ದರು.

## ವಿಜಯಪುರ ಸರ್ಕಾರಿ ಪದವಿ ಕಾಲೇಜು ಪ್ರವೇಶಾತಿ ಪ್ರಾರಂಭ

ವಿಜಯಪುರ ಏ. : 2024–25ನೇ ಶೈಕ್ಷಣಿಕ ಸಾಲಿನ ಬಿ.ಎ ಬಿ.ಎಸ್.ಸಿ ಬಿ.ಕಾಂ. ಬಿ.ಬಿ.ಎ ಹಾಗೂ ಸಂಜೆ ಕಾಲೇಜಿನ ಬಿ.ಕಾಂ ಬಿ.ಸಿ.ಎ ಪ್ರಥಮ ವರ್ಷದ ಪ್ರವೇಶಗಳು ಪ್ರಾರಂಭವಾಗಿವೆ, ಆದರಿಂದ ಈ ಕಾಲೇಜಿನಲ್ಲಿ ಸರ್ಕಾರ ನಿಗಧಿಪಡಿಸಿದ ಶುಲ್ಕವನ್ನು ಮಾತ್ರ ಇದ್ದು, ವಿದ್ಯಾರ್ಥಿನಿಯರಿಗೆ ಮಾತ್ರ ಯಾವುದೇ ಬೋಧನಾ ಶುಲ್ಕು ಇರುವದಿಲ್ಲ. ಆದರಿಂದ ದ್ವಿತಿಯ ಪಿ.ಯು.ಸಿ ತೇರ್ಗಡೆ ಹೊಂದಿರುವ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಪ್ರವೇಶ ಪಡೆದುಕೊಳ್ಳಬೇಕೆಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಎ. ಆಯ್. ಹಂಜಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನಮಡಿ ಚೆಕ್‌ಪೋಸ್ಟ್ ಭೇಟಿ ನೀಡಿದ ಅನುಪಕುಮಾರ




ವಿಜಯಪುರ ಏ. : ವಿಜಯಪುರ ಲೋಕಸಭಾ ಚುನಾವಣೆ–2024ರ ವೆಚ್ಚ ವೀಕ್ಷಕ ಐ.ಆರ್.ಎಸ್‌ನ ಅಧಿಕಾರಿ ಅನುಪಕುಮಾರ ರವರು ಗುರುವಾರ ಬಬಲೇಶ್ವರ ಮತಕ್ಷೇತ್ರ ವ್ಯಕ್ತಿಯ ಕನಮಡಿ ಚೆಕ್ ಪೋಸ್ಟ್ ಪರಿಶೀಲಿದರು. ಚೆಕ್‌ಪೋಸ್ಟಗಳಲ್ಲಿನ ಅಧಿಕಾರಿ ಮತ್ತು ಸಿಬ್ಬಂದಿಯ ಹಾಜರಾತಿ, ಶಾಮಿಯಾನ, ಕುಡಿಯುವ ನೀರು ಸೇರಿದಂತೆ ಚೆಕ್‌ಪೋಸ್ಟ್‌ಗಳ ವ್ಯವಸ್ಥೆಯ ಬಗ್ಗೆ ಮಾಹಿತಿ ಪಡೆದರು. ಚೆಕ್‌ಪೋಸ್ಟಗಳು ಸರಿಯಾಗಿ ಕಾರ್ಯ ನಿರ್ವಹಿಸಬೇಕು. ಚೆಕ್‌ಪೋಸ್ಟಳಿಗೆ ನಿಯೋಜನೆಗೊಂಡ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಸರಿಯಾದ ಸಮಯಕ್ಕೆ ಪಾಳಿ ಅನುಸಾರ ಹಾಜರಾಗಿ ಕಾರ್ಯ ನಿರ್ವಹಿಸಬೇಕು. ಪ್ರತಿಯೊಂದು ವಾಹನವನ್ನು ತಪಾಸಣೆಗೆ ಒಳಪಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸ್ಥಳದಲ್ಲಿದ್ದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಕಟ್ಟುನಿಟ್ಟಿನ ಸೂಚನೆ ಟೀಡಿದರು.

## ಶಕ್ತಿ ಪ್ರದರ್ಶನದ ಮೂಲಕ ನಾಮಪತ್ರ ಸಲ್ಲಿಸಿದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್

ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು, ಬೃಹತ್ ಮೆರವಣಿಗೆ ಮೂಲಕ ಬೆಳಗಾವಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ. ನಾಮಪತ್ರ ಸಲ್ಲಿಸುವ ಮುಂಚೆ ಬೃಹತ್ ಮೆರವಣಿಗೆ ಮೂಲಕ ಶಕ್ತಿ ಪ್ರದರ್ಶನ ಮಾಡಿದ್ದಾರೆ. ಬುಧವಾರ ಬೆಳಗಾವಿಯ ಸಮಾದೇವಿ ದೇವಾಲಯದಲ್ಲಿ ಪೂಜೆ ಸಲ್ಲಿಸಿದರು. ಸಮಾದೇವಿಗಲ್ಲಿಯಿಂದ ಆರಂಭವಾದ ಮೆರವಣಿಗೆಯ ಖಡೆಬಜಾರ ರೋಡ್, ಗಣಪತಿ ಗಲ್ಲಿ, ಕಾಕತಿವೇಸ್, ಶನಿವಾರ ಕೂಟ್, ಚನ್ನಮ್ಮ ವೃತ್ತ ಹಾಗೂ ಜಿಲ್ಲಾಧಿಕಾರಿ ಕಚೇರಿ ವರೆಗೆ ಸಾಗಿತು. ಬೆಳಗಾವಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಜಗದೀಶ್ ಶೆಟ್ಟರ್ ಮೆರವಣಿಗೆ ವಾಹನ ಏರಿದಾಗ ಅಭಿಮಾನಿಗಳು ಜಯ ಘೋಷಣೆ ಹಾಕಿದರು. ವಿವಿಧ ಭಾಗದಿಂದ ಬಂದಿದ ಕಾರ್ಯಕರ್ತರು ಮೋದಿ ಮೋದಿ ಘೋಷಣೆಯೊಂದಿಗೆ ಉತ್ಸಾಹದಿಂದ ಮೆರವಣಿಗೆಯಲ್ಲಿ ಸಾಗಿದರು. ಮೆರವಣಿಗೆಯಲ್ಲಿ ಗಮನ ಸೆಳೆದ ವಿವಿಧ ವಾದ್ಯಗಳು ಜಗದೀಶ್ ಶೆಟ್ಟರ್ ಅವರು ನಾಮಪತ್ರಸಲ್ಲಿಸುವ ಮುಂಚೆ ಢೋಲ್ ತಾಶ್, ಡೊಳ್ಳು ಕುಣಿತ ವಾದ್ಯಗಳು ಎಲ್ಲರ ಗಮನ ಸೆಳೆದರು. ವಿವಿಧ ಭಾಗದಿಂದ ಬಂದಿದ ಜನರು ವಾದ್ಯಗಳೊಂದಿಗೆ ಕುಣಿದು ಕುಪ್ಪಳಿಸಿದರು. ಕೇಸರಿ ಪೇಟ್ ಧರಿಸಿದ ಸಾವಿರಾರು ಮಹಿಳೆಯರು ಮೆರವಣಿಗೆಯಲ್ಲಿ ಗಮನ ಸೆಳೆದರು. ನಾಮಪತ್ರ ಸಲ್ಲಿಕೆಗೆ ನಾಯಕರ ಸಾಥ್ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ, ಗೋವಾ ಸಿಎಂ ಪ್ರಮೋದ ಸಾವಂತ್, ಸಂಸದೆ ಮಂಗಳಾ ಅಂಗಡಿ, ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಶಾಸಕರಾದ ಅಭಯ ಪಾಟೀಲ್, ಬಾಲಚಂದ್ರ ಜಾರಕಿಹೊಳಿ, ದುರ್ಯೋಧನನ ಐಹೊಳೆ, ವಿಧಾನ ಪರಿಷತ್ ಸದಸ್ಯ ಹನಂಮತ್ ನೀರಾಣಿ. ಮಾಜಿ ಶಾಸಕರಾದ ಅನೀಲ ಬೆನಕೆ, ಮಾಜಿ ಸಚಿವ ಮುರಗೇಶ್ ನಿರಾಣಿ, ಮಾಜಿ ರಾಜ್ಯಸಭಾ ಸದಸ್ಯ ಪ್ರಭಾಕರ ಕೋರೆ ಸೇರಿದಂತೆ ಸಾವಿರಾರು ಕಾರ್ಯಕರ್ತರು ಉಪಸ್ಥಿತರಿದ್ದರು.